ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 29ನೇ ಸೆಪ್ಟಂಬರ್, 2020

ಬೀದರ್ ಜಿಲ್ಲೆಯ ಸಹಕಾರ ಬ್ಯಾಂಕ್‌ಗಳಲ್ಲಿ ರೈತರಿಗೆ ಸಹಕಾರ ಸಿಗದಿರುವ ಬಗ್ಗೆ

ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು) :-

1000(1106) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ಜಿಲ್ಲೆಯಲ್ಲಿ ಕಳೆದ 2 ವರ್ಷಗಳಲ್ಲಿ ರೈತರು ಸಾಲಕ್ಕೆ ಸಹಕಾರ ಸಂಘಗಳಲ್ಲಿ ಸಲ್ಲಿಸಿದ ಅರ್ಜಿಗಳು ಎಷ್ಟು ; ನೀಡಿರುವ ಸಾಲ ಎಷ್ಟು;

(ಆ) ಎಲ್ಲಾ ರೈತರಿಗೆ ಸಾಲ ನೀಡದಿರಲು ಕಾರಣಗಳೇನು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಹಾಗಿದ್ದಲ್ಲಿ, ಈ ವರ್ಷ ಜಿಲ್ಲೆಯ ರೈತರ ಬೇಡಿಕೆಗೆ ತಕ್ಕಂತೆ ಸಾಲ ನೀಡಲಾಗುವುದೇ ? (ಸ್ಪಷ್ಟ ವಿವರ ಒದಗಿಸುವುದು)